**All India Radio: Bangalore**
**Regional Bulletin In Kannada**
**19.04.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**19.04.2026 / 2.30 p.m.**

**<><><><>**

ಮುಖ್ಯಾಂಶಗಳು

1. ರಾಣೆಬೆನ್ನೂರಿನಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಶಂಕುಸ್ಥಾಪನೆ ನೆರವೇರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
2. ಕ್ಷೇತ್ರ ಮರುವಿಂಗಡಣೆ ಮೂಲಕ ದಕ್ಷಿಣ ಭಾರತ ರಾಜ್ಯಗಳಿಗೆ ಅನ್ಯಾಯ ಮಾಡಲು ಕೇಂದ್ರ ಸರ್ಕಾರ ಯತ್ನ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಕ್ಷೇಪ
3. ೧೯೯೨ರಿಂದಲೂ ಮಹಿಳಾ ಮೀಸಲಾತಿ ಪರ ಬಿಜೆಪಿ ದೃಢ ನಿಲುವು; ಸಂಸದ ತೇಜಸ್ವಿ ಸೂರ್ಯ ಸ್ಪಷ್ಟನೆ
4. ಕೃಷ್ಣ ಮೇಲ್ದಂಡೆ ಯೋಜನೆಯ ಸಂತ್ರಸ್ಥರಿಗೆ ಜುಲೈವರೆಗೆ ಲೋಕ್ ಅದಾಲತ್ ಆಯೋಜನೆ - ಸಚಿವ ಎಂ.ಬಿ.ಪಾಟೀಲ್

<><><><>

ಹಾವೇರಿ ಜಿಲ್ಲಾ ಪ್ರವಾಸ ಕೈಗೊಂಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದು ರಾಣೆಬೆನ್ನೂರು ತಾಲೂಕಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು. ಇಂದು ಅವರು, ನಿಟ್ಟೂರು ಗ್ರಾಮದಲ್ಲಿ ಬೀರಲಿಂಗೇಶ್ವರ ಸ್ವಾಮಿ ದೇವಸ್ಥಾನದ ೫೦ನೇ ವರ್ಷದ ಸುವರ್ಣ ಮಹೋತ್ಸವದಲ್ಲಿ ಪಾಲ್ಗೊಳ್ಳಲಿದ್ದು, ಭಕ್ತ ಕನಕದಾಸರ ಮಹಾದ್ವಾರತದ ಉದ್ಘಾಟನೆ ಹಾಗೂ ಧರ್ಮಸಭಾ ಕಾರ್ಯಕ್ರಮದಲ್ಲೂ ಭಾಗವಹಿಸಲಿದ್ದಾರೆ.

<><><><>

ಮಹಿಳಾ ಮೀಸಲಾತಿಯು ಕಾಂಗ್ರೆಸ್ ಪಕ್ಷದ ಕನಸಿನ ಕೂಸಾಗಿದ್ದು, ಅದರ ಹೆಸರಿನಲ್ಲಿ ಕ್ಷೇತ್ರ ಮರುಹಂಚಿಕೆ ಮಾಡಿ ದಕ್ಷಿಣ ಭಾರತದ ರಾಜ್ಯಗಳ ಪ್ರಾತಿನಿಧ್ಯ ಕುಗ್ಗಿಸಲು ಕೇಂದ್ರ ಸರ್ಕಾರ ಹೊರಟಿರುವುದು ಸರಿಯಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂವಿಧಾನ

ತಿದ್ದುಪಡಿಯಂತಹ ಮಹತ್ವದ ವಿಷಯದಲ್ಲಿ ವಿರೋಧ ಪಕ್ಷಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದ ಬಿಜೆಪಿ ಸರ್ಕಾರಕ್ಕೆ ಈಗ ಮುಖಭಂಗವಾಗಿದೆ. ಮಸೂದೆ ಸೋಲುತ್ತದೆ ಎಂದು ಗೊತ್ತಿದ್ದರೂ ಅದನ್ನು ಮಂಡಿಸಿರುವುದು ರಾಜಕೀಯ ತಂತ್ರವಾಗಿದೆ ಎಂದರು. ಇದಕ್ಕೂ ಮುನ್ನ ಪ್ರಕಟಣೆ ಮೂಲಕ ಹೇಳಿಕೆ ನೀಡಿದ್ದ ಉಪಮುಖ್ಯಮಂತ್ರಿ, ಮಹಿಳಾ ಮೀಸಲಾತಿ ಮಸೂದೆಗೆ ಕ್ಷೇತ್ರ ಮರುವಿಂಗಡನೆಯ ಷರತ್ತು ವಿಧಿಸಿರುವುದನ್ನು ತೀವ್ರವಾಗಿ ಖಂಡಿಸಿದ್ದರು. ಜನಸಂಖ್ಯೆಯನ್ನು ಯಶಸ್ವಿಯಾಗಿ ನಿಯಂತ್ರಿಸಿರುವ ಕರ್ನಾಟಕ ಸೇರಿದಂತೆ ದಕ್ಷಿಣದ ರಾಜ್ಯಗಳಿಗೆ ಕ್ಷೇತ್ರ ಮರುವಿಂಗಡನೆಯ ಮೂಲಕ ಸಂಸತ್ ಸ್ಥಾನಗಳನ್ನು ಕಡಿತಗೊಳಿಸುವ ಸಂಚು ಇದಾಗಿದೆ ಎಂದು ಅವರು ದೂರಿದ್ದರು.

<><><><>

ಕಾಂಗ್ರೆಸ್ ಪಕ್ಷದ ಮಹಿಳಾ ವಿರೋಧಿ ರಾಜನೀತಿಯನ್ನು ಖಂಡಿಸಿ ಬೆಂಗಳೂರಿನಲ್ಲಿಂದು ರಾಜ್ಯ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಸಬಲನಾರಿ ಸಮರ್ಥ ಭಾರತ ಎಂಬ ಸಂವಾದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಸಂಸದ ತೇಜಸ್ವಿ ಸೂರ್ಯ, ಸಂಸತ್ತಿನಲ್ಲಿ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇಕಡ ೩೩ರಷ್ಟು ಮೀಸಲಾತಿ ನೀಡುವ ಕುರಿತು ೧೯೯೦ ರಿಂದಲೂ ಚರ್ಚೆ ನಡೆಯುತ್ತಿದ್ದು, ಅಂದಿನಿಂದ ಇಲ್ಲಿಯವರೆಗೆ ಬಿಜೆಪಿ ಪಕ್ಷ ಅಧಿಕಾರದಲ್ಲಿದ್ದಾಗಲೂ, ವಿರೋಧ ಪಕ್ಷದಲ್ಲಿದ್ದಾಗಲೂ ಮಹಿಳಾ ಮೀಸಲಾತಿಯ ಪರವಾದ ನಿಲುವನ್ನೇ ತಾಳಿದೆ ಎಂದು ತಿಳಿಸಿದರು. ಈ ಮಸೂದೆ ಜಾರಿಗೆ ಪ್ರಯತ್ನಿಸಿದಾಗಲೆಲ್ಲ ಕಾಂಗ್ರೆಸ್ ಪಕ್ಷ ಅದನ್ನು ವಿಫಲಗೊಳಿಸಲು ವಿವಿಧ ಕಾರಣಗಳನ್ನು ನೀಡುತ್ತಾ ಬಂದಿದೆ ಎಂದು ಟೀಕಿಸಿದರು.

<><><><>

ಬೆಂಗಳೂರಿನಲ್ಲಿ ಆಯೋಜಿಸಲಾಗಿರುವ ಎರಡು ದಿನಗಳ ಸುಸ್ಥಿರ ಇಂಧನ-೨೦೪೭ರ ಭಾರತಕ್ಕಾಗಿ ಕಾರ್ಯಸೂಚಿ ಎಂಬ ಅಂತಾರಾಷ್ಟ್ರೀಯ ಸಮ್ಮೇಳನದ ೨ನೇ ದಿನವಾದ ಇಂದು ಹಸಿರು ಇಂಧನ ಮತ್ತು ಸುಸ್ಥಿರ ತಂತ್ರಜ್ಞಾನದ ಅಳವಡಿಕೆ ಕುರಿತು ತಜ್ಞರು ವಿಚಾರಗೋಷ್ಠಿ ನಡೆಸುತ್ತಿದ್ದಾರೆ. ಸಮ್ಮೇಳನದಲ್ಲಿ ಇಂಧನ ಇಲಾಖೆಯ ಹಿರಿಯ ಅಧಿಕಾರಿಗಳು ಮತ್ತು ಜಾಗತಿಕ ತಜ್ಞರು ಪಾಲ್ಗೊಂಡಿದ್ದು, ಭವಿಷ್ಯದ ಸವಾಲುಗಳನ್ನು ಎದುರಿಸಲು ಸೌರ ಮತ್ತು ಪವನಶಕ್ತಿಯ ಸಮರ್ಥ ಬಳಕೆಯ ಅಗತ್ಯತೆ ಕುರಿತು ಸಮಾಲೋಚಿಸಲಾಗುತ್ತಿದೆ. ಇಂದು ಈ ಸಮ್ಮೇಳನದ

ಸಮಾರೋಪ ಸಮಾರಂಭ ನಡೆಯಲಿದೆ. ಈ ಕಾರ್ಯಕ್ರಮ ಭಾರತವನ್ನು ಇಂಧನ ಕ್ಷೇತ್ರದಲ್ಲಿ ಜಾಗತಿಕ ನಾಯಕನ್ನಾಗಿ ರೂಪಿಸುವ ನಿಟ್ಟಿನಲ್ಲಿ ಮಹತ್ವದ ವೇದಿಕೆಯಾಗಿ ಹೊರಹೊಮ್ಮಿದೆ.

<><><><>

ಕೃಷ್ಣ ಮೇಲ್ದಂಡೆ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆಯಿಂದ ಸಂತ್ರಸ್ತರಾದ ರೈತರ ನೆರವಿಗಾಗಿ ವಿಜಯಪುರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ವತಿಯಿಂದ ಏಪ್ರಿಲ್‌ನಿಂದ ಜುಲೈ ೨೦೨೯ರವರೆಗೆ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಹೆಚ್ಚಿನ ಪರಿಹಾರಕ್ಕಾಗಿ ನ್ಯಾಯಾಲಯದ ಮೊರೆ ಹೋಗಿರುವ ರೈತರು ಪರಸ್ಪರ ಒಪ್ಪಿಗೆ ಮೇರೆಗೆ ತಮ್ಮ ಪ್ರಕರಣಗಳನ್ನು ಇಲ್ಲಿ ತಕ್ಷಣ ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಲೋಕ್ ಅದಾಲತ್‌ನಿಂದ ರೈತರು ನ್ಯಾಯಾಲಯಕ್ಕೆ ಅಲೆದಾಡುವುದು ತಪ್ಪಲಿದ್ದು, ಸಮಯ ಉಳಿತಾಯವಾಗಲಿದೆ.

<><><><>

ಸ್ವಚ್ಛ ಸರ್ವೇಕ್ಷಣ್ ೨೦೨೫-೨೬ರ ಶ್ರೇಯಾಂಕದಲ್ಲಿ ಉತ್ತಮ ಸ್ಥಾನ ಗಳಿಸುವ ಮತ್ತು ನಗರವನ್ನು ತ್ಯಾಜ್ಯಮುಕ್ತಗೊಳಿಸುವ ಉದ್ದೇಶದಿಂದ ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಇಂದು ವಿಶೇಷ ಸ್ವಚ್ಛತಾ ಅಭಿಯಾನ ನಡೆಸಲಾಯಿತು. ಪಾಲಿಕೆಯ ಆಯುಕ್ತ ರಾಜೇಂದ್ರ ಚೋಳನ್ ಅವರ ನಿರ್ದೇಶನದಂತೆ, ಕಾರ್ಯ ಯೋಜನೆಯ ೭ನೇ ಭಾಗವಾಗಿ ಕೇಂದ್ರ ವಲಯದ ೨೭ ಸಾರ್ವಜನಿಕ ಶೌಚಾಲಯಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಯಿತು. ಕಾರ್ಯಾಚರಣೆಯ ವೇಳೆ ಸುಮಾರು ೪.೭೭ ಕ್ವಿಂಟಾಲ್ ತ್ಯಾಜ್ಯವನ್ನು ಸಂಗ್ರಹಿಸಿ ಸುರಕ್ಷಿತವಾಗಿ ವಿಲೇವಾರಿ ಮಾಡಲಾಗಿದ್ದು, ಶೌಚಾಲಯಗಳ ಸುತ್ತಮುತ್ತ ಕಸ ಹಾಕದಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು. ಪಾಲಿಕೆಯ ಹಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಈ ಅಭಿಯಾನದಲ್ಲಿ ಭಾಗವಹಿಸಿದ್ದರು.

<><><><>

ಸರ್ಕಾರ, ಮನೆ ಬಾಗಿಲಿಗೆ ತಂದಿರುವ ಆರೋಗ್ಯ ಸೇತು ಯೋಜನೆಯನ್ನು ಸಾರ್ವಜನಿಕರು ಸದುಪಯೋಗ ಮಾಡಿಕೊಳ್ಳಬೇಕು ಎಂದು ತಾಲ್ಲೂಕು ಆರೋಗ್ಯ ವೈಧ್ಯಾಧಿಕಾರಿ ಡಾ. ಅಜಿತ್ ಹೇಳಿದರು. ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ತಾಲ್ಲೂಕಿನ ದೊಡ್ಡಹಾರನಹಳ್ಳಿಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆರೋಗ್ಯ ಸೇತು ಯೋಜನೆಯಡಿಯಲ್ಲಿ ಆರೋಗ್ಯ

ತಪಾಸಣೆ ನಡೆಸಿ ಮಾತನಾಡಿದರು. ಆರೋಗ್ಯ ಇಲಾಖೆಯ ವತಿಯಿಂದ ತಾಲ್ಲೂಕಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರದಿಂದ ದೂರವಿರುವ ಹಳ್ಳಿಗಳಿಗೆ ಆರೋಗ್ಯ ಸೇತು ವರದಾನವಾಗಿದೆ. ತಾಲ್ಲೂಕಿನಲ್ಲಿ ಒಟ್ಟು ೫೨ ಹಳ್ಳಿಗಳನ್ನು ಗುರುತು ಮಾಡಲಾಗಿದೆ. ಹಳ್ಳಿಗಳು ಆಸ್ಪತ್ರೆಗಳಿಂದ ದೂರ ಇರುವ ಕಾರಣ ಗುರುತು ಮಾಡಲಾಗಿದೆ.

<><><>

ಕೋಲಾರ ಜಿಲ್ಲೆಯಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗುವ ಸಾಧ್ಯತೆಯನ್ನು ಮನಗಂಡು, ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ತಕ್ಷಣದ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ನಿರ್ಧರಿಸಿದೆ. ಎಲ್ಲಾ ಗ್ರಾಮ ಪಂಚಾಯಿತಿ ಮಟ್ಟದಲ್ಲಿ 'ಕುಡಿಯುವ ನೀರಿನ ನಿರ್ವಹಣಾ ಸಮಿತಿ'ಯನ್ನು ರಚಿಸಿ, ಅಧಿಕಾರಿಗಳಿಗೆ ಮಹತ್ವದ ಜವಾಬ್ದಾರಿಗಳನ್ನು ವಹಿಸಲಾಗಿದೆ. ಈ ಸಮಿತಿಯಲ್ಲಿ ಅಧಿಕಾರಿ-ಸಿಬ್ಬಂದಿ ಸದಸ್ಯರಾಗಿ ಕಾರ್ಯನಿರ್ವಹಿಸಲಿದ್ದಾರೆ. ಜಿಲ್ಲಾಡಳಿತವು ಪ್ರತಿಯೊಬ್ಬ ಸದಸ್ಯರಿಗೂ ನಿರ್ದಿಷ್ಟ ಕಾರ್ಯಗಳನ್ನು ನಿಗದಿಪಡಿಸಿದ್ದು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತೀವ್ರ ನೀರಿನ ಅಭಾವವಿರುವ ಪ್ರದೇಶಗಳನ್ನು ಸಮೀಕ್ಷೆ ನಡೆಸಿ ಗುರುತಿಸುವುದು, ಟ್ಯಾಂಕರ್ ಮೂಲಕ ನೀರು ಸರಬರಾಜು ವ್ಯವಸ್ಥೆ ಮಾಡುವುದು, ಕುಡಿಯುವ ನೀರಿನ ಸಹಾಯವಾಣಿ ಸ್ಥಾಪನೆ ಮತ್ತು ಪ್ರತಿದಿನ ನೀರಿನ ಪೂರೈಕೆಯ ವರದಿಯನ್ನು ತಾಲ್ಲೂಕು ಕಚೇರಿಗೆ ಸಲ್ಲಿಸುವುದು ಪ್ರಮುಖ ಜವಾಬ್ದಾರಿಯಾಗಿದೆ.

<><><>

ರಾಜ್ಯದಲ್ಲಿ ಸಿಡಿಲು ಮತ್ತು ಮಿಂಚಿನ ಆರ್ಭಟ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದ್ದು, ೨೦೧೧ರಿಂದ ೨೦೨೫ರ ಜುಲೈ ಅವಧಿಯಲ್ಲಿ ೧ ಸಾವಿರದ ೨೬ ಜನರು ಸಿಡಿಲು ಬಡಿತಕ್ಕೆ ಬಲಿಯಾಗಿದ್ದಾರೆ ಎಂದು ರಾಜ್ಯ ವಿಪತ್ತು ನಿರ್ವಹಣಾ ಕೇಂದ್ರದ ಆಯುಕ್ತ ಎಸ್.ಹೊನ್ನಾಂಭ ಕಳವಳ ವ್ಯಕ್ತಪಡಿಸಿದ್ದಾರೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ವತಿಯಿಂದ ಆಯೋಜಿಸಲಾಗಿದ್ದ ಆನ್‌ಲೈನ್ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಿಡಿಲಿನಿಂದ ಸಂಭವಿಸುವ ಮರಣ ಪ್ರಮಾಣವನ್ನು 'ಶೂನ್ಯ'ಕ್ಕೆ ಇಳಿಸುವುದು ಸರ್ಕಾರದ ಗುರಿಯಾಗಿದೆ. ಆದರೆ ಸಾರ್ವಜನಿಕರ ಅಸಡ್ಡೆ ಮತ್ತು ಮುನ್ನೆಚ್ಚರಿಕೆಯ ಕೊರತೆಯಿಂದ ಸಾವುಗಳು ಸಂಭವಿಸುತ್ತಿವೆ ಎಂದರು. ಬೆಳಗಾವಿ ಜಿಲ್ಲೆಯಲ್ಲಿ ೮೬, ಕಲಬುರಗಿ ೮೦, ವಿಜಯಪುರ ೭೯, ಬೀದರ್ ೭೫ ಮತ್ತು ಹಾಸನ ಜಿಲ್ಲೆಯಲ್ಲಿ ೫೬ ಸಿಡಿಲು ಸಂಬಂಧಿತ ಮರಣ ಪ್ರಕರಣಗಳು ವರದಿಯಾಗಿವೆ ಎಂದರು.

ಸಿಡಿಲು ಬಡಿಯುವ ೩೦ ರಿಂದ ೪೫ ನಿಮಿಷಗಳ ಮೊದಲೇ ಎಚ್ಚರಿಕೆ ನೀಡುವ 'ದಮಿನಿ' ಮೊಬೈಲ್ ಆಪ್ ಅನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು  ಅವರು ಸಲಹೆ ನೀಡಿದ್ದಾರೆ.

<><><><>

ಸಾಮಾನ್ಯ ಪ್ರವೇಶ ಪರೀಕ್ಷೆಗಳು ಇದೇ ೨೩ ಮತ್ತು ೨೪ ರಂದು ನಡೆಯಲಿದ್ದು, ಈ ಪರೀಕ್ಷೆಗಳಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮಾರ್ಗಸೂಚಿ ಕಡ್ಡಾಯವಾಗಿ ಪಾಲಿಸಿ, ಅತ್ಯಂತ ಪಾರದರ್ಶಕ ಮತ್ತು ವ್ಯವಸ್ಥಿತ ರೀತಿಯಲ್ಲಿ ನಡೆಯುವಂತೆ ಕರ್ತವ್ಯ ನಿರ್ವಹಿಸಬೇಕು ಎಂದು ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿಸಿರುವ ಅಧಿಕಾರಿಗಳಿಗೆ ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಸೂಚನೆ ನೀಡಿದ್ದಾರೆ. ಅವರು ಕಾರವಾರದಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಿಲ್ಲೆಯಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆಗಳು ಒಟ್ಟು ೧೪ ಕೇಂದ್ರಗಳಲ್ಲಿ ನಡೆಯಲಿದ್ದು, ೪ ಸಾವಿರದ ೪೯೮ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

<><><><>

ವಿಶ್ವಗುರು ಕಾಯಕಯೋಗಿ ಬಸವೇಶ್ವರ ರವರ ಜಯಂತಿ ಮಹೋತ್ಸವದ ಅಂಗವಾಗಿ ಮೈಸೂರಿನಲ್ಲಿ ಬಸವ ಬಳಗದ ವತಿಯಿಂದ ನಡೆದ ಮೆರವಣಿಗೆಗೆ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ್ ಹೊರಟಿರವರು ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ವಚನಗಳ ಮೂಲಕ ಕಾಯಕದ ಮಹತ್ವವನ್ನು ವಿಶ್ವಕ್ಕೆ ತಿಳಿಸಿದ್ದ ಬಸವಣ್ಣನವರ ಆದರ್ಶಗಳನ್ನು ಪಸರಿಸುವ ಅಗತ್ಯವಿದ್ದು, ನಾಡಿನಾದ್ಯಂತ ಈ ರೀತಿಯ ಮಹೋತ್ಸವಗಳ ಮೂಲಕ ಅವರ ತತ್ವಗಳನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹಿಸಬೇಕು ಎಂದು ತಿಳಿಸಿದರು. ಮೆರವಣಿಗೆಯಲ್ಲಿ ಬಸವಣ್ಣನವರ ಸ್ಥಬ್ಧ ಚಿತ್ರಗಳು, ಡೊಳ್ಳು ಕುಣಿತ, ವೀರಗಾಸೆ ಕುಣಿತ, ದೇವರ ಕುಣಿತ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಲಾತಂಡಗಳು ಭಾಗವಹಿಸಿದ್ದವು.

<><><><>

ಹೋಂಸ್ಟೇ ನಡೆಸಲು ಪ್ರವಾಸೋದ್ಯಮ ಇಲಾಖೆ ಪರವಾನಿಗೆಯನ್ನು  ಕಡ್ಡಾಯವಾಗಿ ಪಡೆದುಕೊಳ್ಳುವಂತೆ ಉತ್ತರಕನ್ನಡ ಪ್ರವಾಸೋದ್ಯಮ ಇಲಾಖೆ ಸೂಚಿಸಿದೆ. ಜಿಲ್ಲೆಯಲ್ಲಿ ಪ್ರವಾಸೋದ್ಯಮ ನಿಯಮ ಉಲ್ಲಂಘಿಸಿ ಇಲಾಖೆ ಅನುಮೋದನೆ ಪಡೆಯದೆ ಹೋಂಸ್ಟೇ ನಡೆಸುವುದು ಕಂಡುಬಂದಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>